ಶ್ರೀ ಆರ್.ರೋಷನ್ ಬೇಗ್ (ಗೃಹ ಮತ್ತು ವಕ್ಫ್ ರಾಜ್ಯ ಸಚಿವರು):

ಅ) ಕೊಡಗು ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಈವರೆಗೂ ಯಾವುದೇ ಖಚಿತವಾದ ಐ.ಎಸ್.ಐ ಚಟುವಟಿಕೆಗಳು ಕಂಡು ಬಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಇಲ್ಲ

ಈ) ಉದ್ಭವಿಸುವುದಿಲ್ಲ.

ಸೋಮವಾರಪೇಟೆ ತಾಲ್ಲೂಕಿನ ಚಿಕ್ಲಿಹೊಳೆ ಅಣೆಕಟ್ಟಿನ ಕಾಮಗಾರಿ.

2968:(4071)

ಶ್ರೀ ಡಿ.ಎಸ್.ಮಾದಪ್ಪ (ಮಡಿಕೇರಿ) ಮಾನ್ಯಬೃಹತ್ ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಸೋಮವಾರಪೇಟೆ ತಾಲ್ಲೂಕಿನ ಚಿಕ್ಲಿಹೊಳೆ ಅಣೆಕಟ್ಟಿನ ಕಾಮಗಾರಿ ಪ್ರಗತಿ ಕಾರ್ಯ ಯಾವ ಹಂತದಲ್ಲಿದೆ, ಈ ಕಾಮಗಾರಿಯ ಅಂದಾಜು ಮೊತ್ತವೆಷ್ಟು?

2. ಈ ಕಾಮಗಾರಿಯನ್ನು ಯಾವಾಗ ಆರಂಭಿಸಲಾಯಿತು ಮತ್ತು ಇದು ಪೂರ್ಣಗೊಳ್ಳಲು ಇನ್ನೂ ಎಷ್ಟು ಅವಧಿ ಬೇಕಾಗುತ್ತದೆ?

3. ಇದರಿಂದ ಪ್ರಯೋಜನಗೊಳ್ಳುವ ಜಮೀನಿನ ವಿಸ್ತೀರ್ಣವೆಷ್ಟು?

ಶ್ರೀ ಕೆ.ಎನ್.ನಾಗೇಗೌಡ (ಬೃಹತ್ ನೀರಾವರಿ ಮಂತ್ರಿಗಳು):

1. ಚಿಕ್ಲಿಹೊಳೆ ಅಣೆಕಟ್ಟಿನ ಕಾಮಗಾರಿ ಪೂರ್ಣವಾಗಿ ಮುಗಿದಿರುತ್ತದೆ ಹಾಗೂ ಇದಕ್ಕೆ ಸಂಬಂಧಿಸಿದ ನಾಲೆಯ 2 ರೀಚ್ (ಭಾಗಗಳು)ಗಳನ್ನು ಹೊರತು ಪಡಿಸಿ ನಾಲೆಯ ಪೂರ್ಣ ಉದ್ದದವರೆಗೆ (29ನೇ ಕಿ.ಮೀ.ವರೆಗೆ) ಎಲ್ಲಾ ಕಾಮಗಾರಿಗಳೂ ಸಹ ಪೂರ್ಣಗೊಂಡಿರುತ್ತವೆ.

2. ಈ ಎರಡು ರೀಚ್‌ಗಳ ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡ ನಂತರ ನಾಲೆ ಕೆಲಸ ಪೂರ್ಣಗೊಳಿಸಲಾಗುವುದು.

3. 865 ಹೆಕ್ಟೇರ್‌ಗಳು.